(ಶ್ರೀ ವಾಟಾಳ್ ನಾಗರಾಜ್, ಶ್ರೀ ಜೆ.ಸಿ. ಮಾಧುಸ್ವಾಮಿ, ಶ್ರೀ ಜಿ.ವಿ. ಶ್ರೀರಾಮರೆಡ್ಡಿ, ಶ್ರೀ ಎಸ್. ರಾಜೇಂದ್ರನ್, ಶ್ರೀ ಕೆ. ಜಯಪ್ರಕಾಶ್ ಹೆಗಡೆಯವರುಗಳು ಸಭಾತ್ಯಾಗ ಮಾಡುವರು)

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2006ರ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕವನ್ನು ಮಂಡಿಸಲು ಅನುಮತಿ ನೀಡಿತು". ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಹಾಗೂ ಅನುಮತಿ ನೀಡಲಾಯಿತು

ಈಗ ಮಾನ್ಯ ಸಚಿವರು ವಿಧೇಯಕವನ್ನು ಮಂಡಿಸಬೇಕು.

7. ಪ್ರಶ್ನೋತ್ತರಗಳು

(ಅ) ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ನೀಡಲಾದ ಉತ್ತರಗಳು

ಅಧ್ಯಕ್ಷರು : ಈಗ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 899 ಮತ್ತು 902 ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ ಮತ್ತು ಶ್ರೀ ಮಲ್ಲಿಕಾರ್ಜುನ ಎಸ್. ಖೂಬಾ ರವರ ಎರಡೂ ಪ್ರಶ್ನೆ ಗಳನ್ನು ಒಟ್ಟಿಗೆ ಸೇರಿಸಿ ತೆಗೆದುಕೊಳ್ಳಲಾಗಿದೆ.

165 (899) ಮತ್ತು (902) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) ಮತ್ತು ಶ್ರೀ ಮಲ್ಲಿಕಾರ್ಜುನ ಎಸ್. ಖೂಬಾ (ಬಸವಕಲ್ಯಾಣ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲಾಗುವುದು;

ಆ) ಇದಕ್ಕಾಗಿ ಸರ್ಕಾರ ಈ ಸಾಲಿನ ಬಜೆಟ್‌ನಲ್ಲಿ ಎಷ್ಟು ಹಣವನ್ನು ಒದಗಿಸಲಾಗಿದೆ;

ಇ) ಬೀದರ್‌ನಲ್ಲಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ; ಕಟ್ಟಡ ನಿರ್ಮಾಣ ಹಾಗೂ ಇತರ ಯಾವ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ; ಬೀದರ್‌ನಲ್ಲಿ ಪ್ರಸಕ್ತ ಸಾಲಿನಲ್ಲಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲಾಗುವುದೇ?

ಡಾ॥ ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಬೆಳಗಾಂ, ಮಂಡ್ಯ, ಹಾಸನ, ಶಿವಮೊಗ್ಗ, ರಾಯಚೂರು ಮತ್ತು ಬೀದರ್‌ನಲ್ಲಿ ತಲಾ ಒಂದು ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಮಂಜೂರಾತಿ ನೀಡಿದ್ದು, ಭಾರತೀಯ ವೈದ್ಯಕೀಯ ಪರಿಷತ್ತು ಮತ್ತು ಕೇಂದ್ರ ಸರ್ಕಾರದೊಡನೆ ಸಮಾಲೋಚನೆ ಮಾಡಲಾಗುತ್ತಿದೆ.

ಆ) ರೂ. 39.33 ಕೋಟಿ

ಇ) ಬೀದರ್ ವೈದ್ಯಕೀಯ ಕಾಲೇಜಿನ ಕಟ್ಟಡದ ಕೆಲಸ ಹಾಗೂ ಇತರೆ ಚಟುವಟಿಕೆಗಳು ಪ್ರಗತಿಯಲ್ಲಿದೆ. ಬೋಧಕ ಸಿಬ್ಬಂದಿ ನೇಮಕಾತಿ ಲಭ್ಯತೆಯ ಆಧಾರದ ಮೇಲೆ ಮಾಡಲಾಗಿದೆ. ಉಳಿದ ಸಿಬ್ಬಂದಿಯ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಪೀಠೋಪಕರಣಗಳನ್ನು ಖರೀದಿಸಲು ಕಾರ್ಯಾದೇಶ ನೀಡಲಾಗಿದೆ. ಭಾರತೀಯ ವೈದ್ಯಕೀಯ ಪರಿಷತ್ತು ಮತ್ತು ಕೇಂದ್ರ ಸರ್ಕಾರದೊಂದಿಗೆ ಈ ಬಗ್ಗೆ ಸಮಾಲೋಚನೆ ಮಾಡಲಾಗುತ್ತಿದೆ.